**All India Radio: Bangalore**
**Regional Bulletin In Kannada**
**20.04.2026 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.04.2026 / 6.40 p.m.**
****************

ಮುಖ್ಯಾಂಶಗಳು

೧. ಮೈಸೂರಿನಲ್ಲಿ ಸಿದ್ದರಾಮ ಶರಣ ಬೆಲ್ದಾಳ ಅವರಿಗೆ ಬಸವ ರಾಷ್ಟ್ರೀಯ ಪುರಸ್ಕಾರ ಪ್ರದಾನ ಮಾಡಿದ ಮುಖ್ಯಮಂತ್ರಿ

೨. ಬಿಟ್ ಕಾಯಿನ್ ಪ್ರಕರಣದಲ್ಲಿ ರಾಜ್ಯದ ಹಲವೆಡೆ ಇಡಿ ದಾಳಿ; ರಾಜಕೀಯ ಪ್ರೇರಿತ ಎಂದ ಸಚಿವ ಪ್ರಿಯಾಂಕ್ ಖರ್ಗೆ

೩. ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧವಿಲ್ಲ- ಕೆಪಿಸಿಸಿ ಮಹಿಳಾ ಘಟಕ ಸ್ಪಷ್ಟನೆ

೪. ಗುಲಾಬಿ ಈರುಳ್ಳಿ ಬೆಳೆಗಾರರ ನೆರವಿಗೆ ಧಾವಿಸುವಂತೆ ಕೇಂದ್ರಕ್ಕೆ ಸಂಸದ ಡಾ.ಕೆ.ಸುಧಾಕರ್ ಮನವಿ

೫. ರಾಜ್ಯದಲ್ಲಿ ರಾತ್ರಿ ವೇಳೆ ಉಷ್ಣ ಅಲೆ ಇನ್ನಷ್ಟು ಹೆಚ್ಚಾಗಲಿದೆ; ಹವಾಮಾನ ಇಲಾಖೆ ಮುನ್ಸೂಚನೆ

****************

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು ಜಿಲ್ಲಾಡಳಿತ ಹಾಗೂ ಮೈಸೂರು ಬಸವ ಬಳಗಗಳ ಒಕ್ಕೂಟದ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಸಿದ್ದರಾಮ ಶರಣ ಬೆಲ್ದಾಳರಿಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಸವ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಸವಣ್ಣನವರು ಕನಸು ಕಂಡ ಸಮಾನತೆ ಆಧಾರಿತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಬದ್ಧರಾಗಬೇಕು ಹಾಗೂ ಬಸವಪಥದಲ್ಲಿ ನಡೆಯುವ ಶಪಥ ಮಾಡುವಂತೆ ಎಂದು ಕರೆ ನೀಡಿದ್ದಾರೆ.

೧೨ನೇ ಶತಮಾನದಲ್ಲಿ ಬಸವಣ್ಣ ಹಾಗೂ ಬಸವಾದಿ ಶರಣರು ಜಾತಿ ವ್ಯವಸ್ಥೆ, ಅಸಮಾನತೆ ಮತ್ತು ಮೂಢನಂಬಿಕೆಗಳ ವಿರುದ್ಧ ಧೈರ್ಯವಾಗಿ ಹೋರಾಡಿ ಹೊಸ ಸಾಮಾಜಿಕ ಚಿಂತನೆಗೆ ದಾರಿ ತೋರಿದ್ದರು ಎಂದು ತಿಳಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಮಾತನಾಡಿ, ಬಾಲ್ಯದಲ್ಲಿಯೇ ಬಸವಣ್ಣ ಲಿಂಗ ತಾರತಮ್ಯದ ವಿರುದ್ಧ ಧ್ವನಿ ಎತ್ತಿ ಸಾಮಾಜಿಕ ಚಳವಳಿಗೆ ನಾಂದಿ ಹಾಡಿದ ಮಹಾನ್ ಸಮಾಜ ಸುಧಾರಕ ಎಂದು ಬಣ್ಣಿಸಿದರು.

ಸಚಿವ ಶಿವರಾಜ ತಂಗಡಗಿ ಮಾತನಾಡಿ, ಬಸವಣ್ಣನವರ ವಿಚಾರಧಾರೆಗಳನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದ್ದು, ಅವರನ್ನು ಸಾಂಸ್ಕೃತಿಕ ನಾಯಕನಾಗಿ ಘೋಷಿಸಿರುವುದು ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ಪ್ರಶಸ್ತಿ ಸ್ವೀಕರಿಸಿದ ಸಿದ್ದರಾಮ ಶರಣ ಬೆಲ್ದಾಳರು ಮಾತನಾಡಿ, ಬಸವಣ್ಣನವರ ತತ್ವಗಳನ್ನು ಅನುಷ್ಠಾನಗೊಳಿಸಿದಾಗ ಮಾತ್ರ ಸಮಾನತೆ ಮತ್ತು ರಾಷ್ಟ್ರೀಯ ಏಕತೆ ಸಾಧ್ಯವೆಂದು ಅಭಿಪ್ರಾಯಪಟ್ಟಿದ್ದಾರೆ.

***************

ರಾಜ್ಯದ ವಿವಿಧೆಡೆ ಇಂದು ಬಸವ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಬೆಳಗಾವಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಬಸವಣ್ಣನವರ ಪ್ರತಿಮೆಗೆ ಮಾಲಾರ್ಪಣೆ  ಬಸವೇಶ್ವರರ ಜಯಂತಿ ಉತ್ಸವಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಬಸವಣ್ಣನವರ ಸಾಮಾಜಿಕ ಕಾಳಜಿಯ ಆದರ್ಶಗಳನ್ನು ಪಾಲಿಸುವುದು ನಮ್ಮ ಆದ್ಯತೆ ಆಗಬೇಕು ಎಂದು ತಿಳಿಸಿದರು.

ಬಸವ ಜಯಂತಿ ಕಾರ್ಯಕ್ರಮವು ಒಂದು ದಿನಕ್ಕೆ ಸೀಮಿತವಾಗದೆ ಪ್ರತಿ ದಿನವು ಆಚರಿಸಬೇಕು. ಬಸವ ತತ್ವ ಸಿದ್ಧಾಂತಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಪಾಲಿಸಿದಾಗ ಮಾತ್ರ ಬಸವ ಜಯಂತಿ ಸಾರ್ಥಕವಾಗಲಿದೆ ಎಂದು  ಕೋಲಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ಜಯಶ್ರೀ ಅಭಿಪ್ರಾಯಪಟ್ಟಿದ್ದಾರೆ.

"ಜಗಜ್ಯೋತಿ ಬಸವೇಶ್ವರರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ, ಅವರ 'ಕಾಯಕವೇ ಕೈಲಾಸ' ಮತ್ತು 'ದಾಸೋಹ' ತತ್ವಗಳು ಇಂದಿನ ಆಧುನಿಕ ಯುಗಕ್ಕೆ ಪ್ರಸ್ತುತವಾಗಿದೆ ಎಂದು ಗದಗದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರು ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲಾಡಳಿತದವತಿಯಿಂದ ನಗರದ ಕುವೆಂಪು ಕಲಾ ಮಂದಿರದಲ್ಲಿ ಬಸವ ಜಯಂತಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಡಿ ತಮ್ಮಯ್ಯ, ಪರಿಷತ್ ಸದಸ್ಯ ಸಿ.ಟಿ ರವಿ ಸೇರಿ ಅನೇಕ ಗಣ್ಯರು ಭಾಗವಹಿಸಿದ್ದರು.

ಕಾಯಕವೇ ಕೈಲಾಸ ಎಂದು ಸಾರಿದ ವಿಶ್ವಗುರು ಬಸವಣ್ಣನವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುವ ಮೂಲಕ ಸಮ ಸಮಾಜ ನಿರ್ಮಿಸೋಣ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಕರೆ ನೀಡಿದ್ದಾರೆ.

ವಿಜಯಪುರ ಹೊಸಪೇಟೆಯ ಜಗದ್ಗುರು ಕೊಟ್ಟೂರು ಮಠದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ೧೯ ವಿವಿಧ ಜೋಡಿಗಳ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗಿತು.

ಸಾಮಾಜಿಕ ಬದಲಾವಣೆಗೆ ಬಸವಣ್ಣನವರು ತಮ್ಮ ವಚನಗಳ ಮೂಲಕ ಕೈಗೊಂಡ ವಿಚಾರಧಾರೆಯೂ ಭಾರತ ಸಂವಿಧಾನದಲ್ಲಿ ಅಡಕವಾಗಿವೆ ಎಂದು ತುಮಕೂರು ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.

ಬಸವಣ್ಣನವರನ್ನು ಆರಾಧಿಸುವುದಕ್ಕಿಂತ ಅವರ ವಚನ ಸಂದೇಶಗಳನ್ನು ಪಾಲಿಸುವುದು ಇಂದಿನ ದಿನಗಳಲ್ಲಿ ಅತ್ಯಗತ್ಯವಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ತತ್ವ, ಹಾಗೂ ಕಾಯಕ ನಿಷ್ಠೆಯನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಅಭಿಪ್ರಾಯಪಟ್ಟಿದ್ದಾರೆ.

****************

ಕಾಂಗ್ರೆಸ್ ಶಾಸಕ ಎನ್ ಎ ಹ್ಯಾರಿಸ್ ಮತ್ತು ಅವರ ಪುತ್ರ ಮೊಹಮ್ಮದ್ ನಲಪಾಡ್ ನಿವಾಸಗಳ ಸೇರಿದಂತೆ ರಾಜ್ಯದ ಹಲವೆಡೆ ಇಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಬಿಟ್‌ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಈ ದಾಳಿ ನಡೆದಿದ್ದು, ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.  ಈ ಕುರಿತಂತೆ ಪ್ರತಿಕ್ರಿಯಿಸಿರುವ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಚಾರ್ಜ್ ಶೀಟ್‌ನಲ್ಲಿ ಹೆಸರಿರುವ ಕೆಲ ವ್ಯಕ್ತಿಗಳ ವ್ಯವಹಾರಗಳ ಮೇಲೆ ಇಡಿ ಅಧಿಕಾರಿಗಳು ಏಕೆ ದಾಳಿ ನಡೆಸಿಲ್ಲ ಎಂದು ಪ್ರಶ್ನಿಸಿದ್ದಾರೆ.

***************

ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧವಿಲ್ಲ ಎಂದು ಕೆಪಿಸಿಸಿ ಮಹಿಳಾ ಘಟಕ ಸ್ಪಷ್ಟಪಡಿಸಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ರಾಜ್ಯಪಾಲರಾದ ಮಾರ್ಗರೇಟ್ ಆಳ್ವ, ಕಾಂಗ್ರೆಸ್ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯ ರೆಡ್ಡಿ, ಮಾಜಿ ಶಾಸಕಿ ಪೂರ್ಣಿಮ ಶ್ರೀನಿವಾಸ್ ಮಾತನಾಡಿ, ಕೇಂದ್ರ ಜನರನ್ನು ದಾರಿತಪ್ಪಿಸುತ್ತಿದೆ ಎಂದು ದೂರಿದ್ದಾರೆ.

ಮಾರ್ಗರೇಟ್ ಆಳ್ವ ಮಾತನಾಡಿ, ಕಾಂಗ್ರೆಸ್ ಸದಾ ಮಹಿಳೆಯರ ಪರ ಇರುವ ಪಕ್ಷವಾಗಿದ್ದು, ಮೊದಲು ಶೇಕಡಾ ೩೩ ರಷ್ಟು ಒಬಿಸಿ ಮಹಿಳೆಯರಿಗೆ ಮೀಸಲಾತಿ ನೀಡುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

***************

ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಜಿಲ್ಲೆಗಳ ಪ್ರಮುಖ ಬೆಳೆಯಾದ, ಜಿ.ಐ. ಟ್ಯಾಗ್ ಹೊಂದಿರುವ 'ಬೆಂಗಳೂರು ಗುಲಾಬಿ ಈರುಳ್ಳಿ' ಬೆಳೆಗಾರರು ಎದುರಿಸುತ್ತಿರುವ ಮಾರುಕಟ್ಟೆ ಬಿಕ್ಕಟ್ಟಿನ ಕುರಿತು ಸಂಸದ ಡಾ. ಕೆ. ಸುಧಾಕರ್ ಕೇಂದ್ರ ಸರ್ಕಾರದ ಗಮನ ಸೆಳೆದಿದ್ದಾರೆ.

ಗಲ್ಫ್ ರಾಷ್ಟ್ರಗಳಲ್ಲಿ ಉಂಟಾಗಿರುವ ಭೌಗೋಳಿಕ ರಾಜಕೀಯ ಸಂಘರ್ಷಗಳಿಂದಾಗಿ ಪೂರೈಕೆ ಸರಪಳಿಯಲ್ಲಿ ವ್ಯತ್ಯಯ ಉಂಟಾಗಿದ್ದು, ಈ ರಫ್ತು ಆಧಾರಿತ ಬೆಳೆಯ ಮಾರುಕಟ್ಟೆ ಕುಸಿದಿದೆ.

ಈ ಹಿಂದೆ ಪ್ರತಿ ಚೀಲಕ್ಕೆ ೧ ಸಾವಿರದ ೨೦೦ ರೂಪಾಯಿಯಿಂದ ೧ ಸಾವಿರದ ೫೦೦ ರೂಪಾಯಿ ಇರುತ್ತಿದ್ದ ಬೆಲೆ ಈಗ ೧೦೦ ರೂಪಾಯಿಗಿಂತ ಕೆಳಕ್ಕೆ ಇಳಿದಿರುವುದು ರೈತರನ್ನು ತೀವ್ರ ಆರ್ಥಿಕ ಸಂಕಷ್ಟಕ್ಕೆ ತಳ್ಳಿದೆ. ಈ ಹಿನ್ನೆಲೆಯಲ್ಲಿ ಮಧ್ಯಪ್ರವೇಶಿಸುವಂತೆ ಡಾ. ಸುಧಾಕರ್ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶ್ರೀ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದಿದ್ದಾರೆ.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆಗೆ ಭೇಟಿ ನೀಡಲಿದ್ದು, ಹಲವು ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಕಾರ್ಯಕ್ರಮವು ನಡೆಯಲಿದೆ.

****************

ರಾಜ್ಯದಲ್ಲಿ ರಾತ್ರಿ ವೇಳೆಯೂ ಉಷ್ಣ ಅಲೆ ಇನ್ನಷ್ಟು ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಹವಾಮಾನ ತಜ್ಞ ಡಾ.ಸಿ.ಎಸ್.ಪಾಟೀಲ್, ಹಲವು ಜಿಲ್ಲೆಗಳಲ್ಲಿ ತಾಪಮಾನ ೪೦ ಡಿಗ್ರಿ ಸೆಲ್ಸಿಯಸ್ ತಲುಪಿದ್ದು, ನೀರಿನ ಅಭಾವ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ.

ಈ ನಡುವೆ ರಾಜ್ಯದ ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

ಕರಾವಳಿ ಕರ್ನಾಟಕದ ಕೆಲವು ಸ್ಥಳಗಳಲ್ಲಿ ಮುಂದಿನ ನಾಲ್ಕು ದಿನಗಳಲ್ಲಿ ಗುಡುಗು ಸಹಿತಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಮತ್ತು ಹಾಸನ ಜಿಲ್ಲೆಗಳಲ್ಲಿಯೂ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಇಲಾಖೆ ಮನ್ಸೂಚನೆ ನೀಡಿದೆ.

****************

ಹಾಸನ ಜಿಲ್ಲಾಧಿಕಾರಿ ಲತಾ ಕುಮಾರಿ ಇಂದು ಹಾಸನ ನಗರದ ಲಕ್ಷ್ಮೀಪುರ ಬಡಾವಣೆ, ಎಸ್.ವಿ.ಎಂ. ಸ್ಕೂಲ್ ಹಿಂಭಾಗ ಹಾಗೂ ಪೆನ್ಷನ್ ಮೊಹಲ್ಲಾಗೆ  ಭೇಟಿ ನೀಡಿ ಗಣತಿದಾರರೊಂದಿಗೆ ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಜನಗಣತಿ ೨೦೨೭ ದೇಶದಾದ್ಯಂತ ನಡೆಯುತ್ತಿದ್ದು, ಗಣತಿದಾರರು ಮನೆ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಕೇಳುವ ಸರಳ ೩೪ ಪ್ರಶ್ನೆಗಳಿಗೆ ಉತ್ತರ ನೀಡಿ ಸಾರ್ವಜನಿಕರು ಸಹಕರಿಸುವಂತೆ ಕೋರಿದ್ದಾರೆ.

********ಮುಕ್ತಾಯ********